# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : 1062

ಸದಸ್ಯರ ಹೆಸರು : ಶ್ರೀ ಐವನ್ ಡಿ' ಸೋಜಾ (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು

ಉತ್ತರಿಸಬೇಕಾದ ದಿನಾಂಕ : 18-12-2024

| | ಪ್ರಶ್ನೆ | ಉತ್ತರ |
|---|---|---|
| ಅ. | ಬ್ಯಾಟರಿ / ವಿದ್ಯುತ್ ಚಾಲಿತ ಆಟೋರಿಕ್ಷಾಗಳ ಪರವಾನಿಗೆ ಇಲ್ಲದೇ ಯಾವುದೇ ಸಾರಿಗೆ ನಿಯಮಗಳ ವಿರುದ್ಧವಾಗಿ ರಾಜ್ಯದ ಯಾವ ಭಾಗದಲ್ಲಿ ಕಾರ್ಯ ನಿರ್ವಹಿಸಬಹುದೆಂಬ ಕೇಂದ್ರ ಸರ್ಕಾರದ ಆದೇಶ ವಿರುದ್ಧ ಕೈಗೊಂಡಿರುವ ಕ್ರಮವೇನು; (ವಿವರ ನೀಡುವುದು) | ಕೇಂದ್ರ ಸರ್ಕಾರದ ಅಧಿಸೂಚನೆ ಸಂಖ್ಯೆ: S.O 5333 (E), ದಿನಾಂಕ:18-10-2018ರಲ್ಲಿ ಮೋಟಾರು ವಾಹನಗಳ ಕಾಯ್ದೆ 1988ರ, ಕಲಂ 66 (3)(ಎನ್)ರಲ್ಲಿ ಪ್ರದತ್ತವಾದ ಅಧಿಕಾರಡಿ, ಮೆಥನಾಲ್ ಮತ್ತು ಇಥನಾಲ್ ಇಂಧನ ಬಳಸಿ ಸಂಚರಿಸುವ ಸಾರಿಗೆ ವಾಹನಗಳು ಹಾಗೂ ಬ್ಯಾಟರಿ ಆಧಾರಿತ ವಾಹನಗಳಿಗೆ ಸದರಿ ಕಾಯ್ದೆ ಕಲಂ 66 (1) ರಹದಾರಿ ವಿನಾಯತಿ ನೀಡಿ ಆದೇಶವನ್ನು ಹೊರಡಿಸಲಾಗಿರುತ್ತದೆ.<br>ಅದರಂತೆ, ರಾಜ್ಯ ಸರ್ಕಾರದ ಅಧಿಸೂಚನೆ ಸಂಖ್ಯೆ: ಟಿಡಿ 2 ಟಿಡಿಓ 2019, ದಿನಾಂಕ: 20-01-2022ರಲ್ಲಿ ಮೋಟಾರು ವಾಹನಗಳ ಕಾಯ್ದೆ 1988ರ, ಕಲಂ 66 (3)(ಎನ್)ರಲ್ಲಿ ಪ್ರದತ್ತವಾದ ಅಧಿಕಾರ ಚಲಾಯಿಸಿ ಬ್ಯಾಟರಿ ಚಾಲಿತ, ಮೆಥನಾಲ್ ಮತ್ತು ಇಥನಾಲ್ ಇಂಧನ ಬಳಕೆಯ ಸಾರಿಗೆ ವಾಹನಗಳಿಗೆ ಸದರಿ ಕಾಯ್ದೆ ಕಲಂ 66 (1) ರಹದಾರಿ ವಿನಾಯತಿ ನೀಡಿ ಆದೇಶವನ್ನು ಹೊರಡಿಸಲಾಗಿರುತ್ತದೆ.<br>ಸರ್ಕಾರದ ಮೇಲ್ಕಂಡ ಅಧಿಸೂಚನೆಯನ್ವಯ ರಾಜ್ಯದಲ್ಲಿ ನೋಂದಣಿಯಾಗುವ ಬ್ಯಾಟರಿ/ ವಿದ್ಯುತ್ ಚಾಲಿತ ಆಟೋರಿಕ್ಷಾಗಳು ರಾಜ್ಯದ್ಯಂತ ಸಂಚರಿಸಲು ಅವಕಾಶವಿರುತ್ತದೆ. |
| ಆ. | ಮೋಟಾರ್ ಕಾಯ್ದೆ ಅನ್ವಯ ಕಾರ್ಯ ನಿರ್ವಹಿಸುತ್ತಿರುವ ಆಟೋರಿಕ್ಷಾ ಚಾಲಕರಿಗೆ ಒಂದು ನಿಯಮ ಮತ್ತು ಬ್ಯಾಟರಿ ಚಾಲಿತ ರಿಕ್ಷಾಗಳಿಗೆ ಒಂದು ನಿಯಮ ಎಂಬ 2 ಕಾನೂನುಗಳು ತಾರತಮ್ಯ ಮಾಡಿರುವುದು ಸರಿಯೇ? (ವಿವರ ನೀಡುವುದು) | ರಾಜ್ಯದಲ್ಲಿ ನೋಂದಣಿಯಾಗುವ ಪೆಟ್ರೋಲ್, ಡಿಸೇಲ್ ಮತ್ತು ಗ್ಯಾಸ್ ಇಂಧನ ಬಳಸುವ ಆಟೋರಿಕ್ಷಾ ವಾಹನಗಳು, ಕೇಂದ್ರ ಮೋಟಾರು ವಾಹನಗಳ ನಿಯಮಗಳು 1989ರ ನಿಯಮ 66 (1)ರನ್ವಯ ರಹದಾರಿ ಪಡೆದು ಸಂಚರಿಸಬೇಕಾಗಿರುತ್ತದೆ.<br>ಕೇಂದ್ರ ಸರ್ಕಾರದ ಅಧಿಸೂಚನೆ ಸಂಖ್ಯೆ: S.O 5333 (E), ದಿನಾಂಕ:18-10-2018ರಲ್ಲಿ ಬ್ಯಾಟರಿ / ವಿದ್ಯುತ್ ಚಾಲಿತ ಆಟೋರಿಕ್ಷಾಗಳಿಗೆ ನಿಯಮ 66 (1) ರಹದಾರಿ ವಿನಾಯತಿ ನೀಡಿ ಆದೇಶವನ್ನು ಹೊರಡಿಸಲಾಗಿದ್ದು, ಅದರಂತೆ, ಕ್ರಮ ವಹಿಸಲಾಗಿದೆ. |

| | ಪ್ರಶ್ನೆ | ಉತ್ತರ |
|---|---|---|
| ಇ. | ಸಾರಿಗೆ ಇಲಾಖೆಯು ಬ್ಯಾಟರಿ ಚಾಲಿತ ವಾಹನಗಳಿಗೆ ತಮಿಳುನಾಡು ಮತ್ತು ದೆಹಲಿ ಮಾದರಿಯಲ್ಲಿ ಆ ರಾಜ್ಯದ ಸಾರಿಗೆ ವ್ಯವಸ್ಥೆ ಅನುಗುಣವಾಗಿ ಕಾನೂನು ರಚಿಸಿದ್ದು, ಈ ಬಗ್ಗೆ ಕ್ರಮ ಕೈಗೊಳ್ಳದಿರಲು ಕಾರಣಗಳೇನು; (ಕೈಗೊಂಡ ಕ್ರಮದ ಬಗ್ಗೆ ವಿವರ ನೀಡುವುದು) | ಸಾರಿಗೆ ಇಲಾಖೆಯು ಬ್ಯಾಟರಿ ಚಾಲಿತ ವಾಹನಗಳಿಗೆ ತಮಿಳುನಾಡು ಮತ್ತು ದೆಹಲಿ ಮಾದರಿಯಲ್ಲಿ ಆ ರಾಜ್ಯದ ಸಾರಿಗೆ ವ್ಯವಸ್ಥೆ ಅನುಗುಣವಾಗಿ ಕಾನೂನು ರಚಿಸಿರುವಂತೆ ಕರ್ನಾಟಕ ರಾಜ್ಯದಲ್ಲಿಯೂ ಅಧಿಸೂಚನೆಯನ್ನು ಹೊರಡಿಸುವ ಕುರಿತ ಪ್ರಸ್ತಾವನೆಯು ಪರಿಶೀಲನೆಯಲ್ಲಿರುತ್ತದೆ. |
| ಈ. | ಸರ್ಕಾರವು ಪೆಟ್ರೋಲ್, ಡಿಸೇಲ್ ಮತ್ತು ಗ್ಯಾಸ್ ಚಾಲಿತ ರಿಕ್ಷಾಗಳಂತೆ ಬ್ಯಾಟರಿ ರಿಕ್ಷಾಗಳಿಗೂ ಸಾರಿಗೆ ನಿಯಮದಡಿ ಪರವಾನಿಗೆ ಕಡ್ಡಾಯಗೊಳಿಸಲು ಕ್ರಮ ಕೈಗೊಂಡಿದೆಯೇ; ಈ ವ್ಯವಸ್ಥೆಯಲ್ಲಿ ಉಂಟಾದ ತಾರತಮ್ಯ ನಿವಾರಿಸಲು ತೆಗೆದುಕೊಳ್ಳುವ ಕ್ರಮವೇನು? (ಈ ಬಗ್ಗೆ ವಿವರ ನೀಡುವುದು) | ರಾಜ್ಯ ಸರ್ಕಾರದ ಅಧಿಸೂಚನೆ ಸಂಖ್ಯೆ: ಟಿಡಿ 2 ಟಿಡಿಓ 2019, ದಿನಾಂಕ: 20-01-2022ರಲ್ಲಿ ಮೋಟಾರು ವಾಹನಗಳ ಕಾಯ್ದೆ 1988ರ, ಕಲಂ 66 (3)(ಎನ್)ರಲ್ಲಿ ಪ್ರದತ್ತವಾದ ಅಧಿಕಾರ ಚಲಾಯಿಸಿ ಬ್ಯಾಟರಿ ಚಾಲಿತ, ಮೆಥನಾಲ್ ಮತ್ತು ಇಥನಾಲ್ ಇಂಧನ ಬಳಕೆಯ ಸಾರಿಗೆ ವಾಹನಗಳಿಗೆ ಸದರಿ ಕಾಯ್ದೆ ಕಲಂ 66 (1) ರಹದಾರಿ ವಿನಾಯತಿ ನೀಡಿ ಹೊರಡಿಸಲಾಗಿರುವ ಆದೇಶವನ್ನು ಹಿಂಪಡೆದು, ಬ್ಯಾಟರಿ ಚಾಲಿತ, ಮೆಥನಾಲ್ ಮತ್ತು ಇಥನಾಲ್ ಇಂಧನ ಬಳಕೆಯ ಸಾರಿಗೆ ವಾಹನಗಳಿಗೆ ಸಂಬಂಧಪಟ್ಟ ರಹದಾರಿಯನ್ನು ಶುಲ್ಕ ರಹಿತವಾಗಿ ಮಂಜೂರು ಮಾಡುವ ಕುರಿತ ಪ್ರಸ್ತಾವನೆ ಪರಿಶೀಲನೆಯಲ್ಲಿರುತ್ತದೆ. |

**ಟಿಡಿ 64 ಟಿಡಿಕ್ಯೂ 2024**

**(ರಾಮಲಿಂಗಾರೆಡ್ಡಿ)**
ಸಾರಿಗೆ ಮತ್ತು ಮುಜರಾಯಿ ಸಚಿವರು